ಕರ್ನಾಟಕ ಸರ್ಕಾರ

**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003**

ಸಂಖ್ಯೆ: ಪಿಯು.ಮೌಮಾವಿ1/ಪ-3/ಶುಲ್ಕ/04/2023-24 ದಿನಾಂಕ:21-05-2024

# ಸು ತ್ತೋ ಲೆ

**ವಿಷಯ: 2024 ನೇ ಸಾಲಿನಲ್ಲಿ ನಡೆಯಲಿರುವ ದ್ವಿತೀಯ ಪಿ.ಯು.ಸಿ ಪರೀಕ್ಷೆ-3 ಕ್ಕೆ ಪುನರಾವರ್ತಿತ ವಿದ್ಯಾರ್ಥಿಗಳು ಹಾಗೂ ಫಲಿತಾಂಶ ಉತ್ತಮಪಡಿಸಿಕೊಳ್ಳುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವ ಬಗ್ಗೆ.**

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ ಇಪಿ 203 ಎಸ್ಎಲ್ಬಿ 2023 ದಿನಾಂಕ:21/09/2023.

--------

2024ನೇ ಸಾಲಿನಲ್ಲಿ ನಡೆಯಲಿರುವ ದ್ವಿತೀಯ ಪಿಯುಸಿ ಪರೀಕ್ಷೆ-3 ಕ್ಕೆ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಈ ಕೆಳಕಂಡಂತೆ ದಿನಾಂಕ ನಿಗದಿಪಡಿಸಲಾಗಿದೆ. ಎಲ್ಲಾ ಕಾಲೇಜಿನ ಪ್ರಾಂಶುಪಾಲರುಗಳು ಈ ಸುತ್ತೋಲೆಯನ್ನು ಕಡ್ಡಾಯವಾಗಿ ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸುವುದು ಮತ್ತು ಪ್ರಾಂಶುಪಾಲರುಗಳು ಈ ಕೆಳಗಿನಂತೆ ಸೂಚನೆಗಳನ್ನು ಪಾಲಿಸುವುದು.

1. 2024 ರ ಪರೀಕ್ಷೆ-1 ಮತ್ತು 2 ರಲ್ಲಿ ಉತ್ತೀರ್ಣರಾಗಿದ್ದು ಫಲಿತಾಂಶ ಉತ್ತಮಪಡಿಸಿಕೊಳ್ಳಲು 2024ರ ದ್ವಿತೀಯ ಪಿಯುಸಿ ಪರೀಕ್ಷೆ-3 ನ್ನು ಬರೆಯಲು ಇಚ್ಛಿಸಿದಲ್ಲಿ, ಅಂತಹ ವಿದ್ಯಾರ್ಥಿಗಳು ಫಲಿತಾಂಶ ಪಟ್ಟಿಯ ಆಧಾರದ ಮೇಲೆ ನಿಯಮಾನುಸಾರ ಫಲಿತಾಂಶ ಉತ್ತಮಪಡಿಸಿಕೊಳ್ಳಲು ಅರ್ಜಿಯನ್ನು ಕಾಲೇಜಿನಲ್ಲಿ ಪ್ರಾಂಶುಪಾಲರಿಗೆ ಸಲ್ಲಿಸುವುದು. ಸದರಿ ಪ್ರಕ್ರಿಯೆಗೆ ಮಂಡಲಿಯ ಅನುಮತಿ ಪಡೆಯುವ ಅವಶ್ಯಕತೆ ಇರುವುದಿಲ್ಲ. ವಿದ್ಯಾರ್ಥಿಗಳು ಫಲಿತಾಂಶ ಉತ್ತಮಪಡಿಸಿಕೊಳ್ಳಲು ONLINE ಮುಖಾಂತರವೂ ಅರ್ಜಿ ಸಲ್ಲಿಸಬಹುದಾಗಿದೆ. **2024ನೇ ಸಾಲಿಗಿಂತ ಹಿಂದಿನ ಪರೀಕ್ಷೆಗಳಲ್ಲಿ ಉತ್ತೀರ್ಣರಾದ/ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಫಲಿತಾಂಶ ಉತ್ತಮಪಡಿಸಿಕೊಳ್ಳಲು ಅವಕಾಶವಿರುವುದಿಲ್ಲ.**
2. ಮಾರ್ಚ್ 2024ರ ದ್ವಿತೀಯ ಪಿಯುಸಿ ಪರೀಕ್ಷೆ-1 ಮತ್ತು 2 ರಲ್ಲಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ಅನುತ್ತೀರ್ಣ ಅಂಕಪಟ್ಟಿ ಅರ್ಜಿ (MCA) ಗಳನ್ನು ಮಂಡಲಿಯಿಂದ ನೀಡಲಾಗುವುದಿಲ್ಲ. ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಮಂಡಲಿಯಿಂದ ನೀಡಲಾಗುವ ಫಲಿತಾಂಶ ಪಟ್ಟಿಯ (RESULT SHEET) ಆಧಾರದ ಮೇಲೆ ಪರೀಕ್ಷೆ-3 ಕ್ಕೆ ನೋಂದಾಯಿಸಿಕೊಂಡು ಪರೀಕ್ಷಾ ಶುಲ್ಕ ಸ್ವೀಕರಿಸಿ ಮಂಡಲಿಯ PU EXAM ಲಾಗಿನ್‌ನಲ್ಲಿ ವಿದ್ಯಾರ್ಥಿಗಳ ಮಾಹಿತಿಯನ್ನು ಭರ್ತಿ ಮಾಡುವುದು.
3. ಪರೀಕ್ಷೆ-1 ಕ್ಕೆ ನೊಂದಾಯಿಸಿಕೊಂಡು ಪರೀಕ್ಷೆ-1 ಮತ್ತು ಪರೀಕ್ಷೆ-2 ನ್ನು ಬರೆಯದೇ ಇರುವ ವಿದ್ಯಾರ್ಥಿಗಳು ಪರೀಕ್ಷೆ-3 ಕ್ಕೆ ನೋಂದಾಯಿಸಿಕೊಳ್ಳಬಹುದಾಗಿದೆ.
4. ವಿದ್ಯಾರ್ಥಿಗಳು Online Registration ಮಾಡುವ ಮೂಲಕವೂ ಪರೀಕ್ಷೆ-3 ಕ್ಕೆ ನೋಂದಾಯಿಸಿಕೊಳ್ಳಬಹುದಾಗಿದೆ.
5. ಮಾರ್ಚ್ 2024 ರ ಪರೀಕ್ಷೆ-1 ಕ್ಕೆ ನೋಂದಾಯಿಸಿದ್ದ ವಿದ್ಯಾರ್ಥಿಗಳಿಗೆ ಮಾತ್ರ ಪರೀಕ್ಷೆ-3 ಕ್ಕೆ Online ನಲ್ಲಿ ನೋಂದಾಯಿಸಿಕೊಳ್ಳಲು ಅವಕಾಶವಿರುತ್ತದೆ. ನೋಂದಾಯಿಸಿಕೊಳ್ಳಲು ಮಂಡಲಿಯ ಜಾಲತಾಣ https://kseab.karnataka.gov.in → ಮತ್ತಷ್ಟು ಓದಿ

➡ ದ್ವಿತೀಯ ಪಿಯು ಪರೀಕ್ಷೆ-3 ರ ಪರೀಕ್ಷೆಗೆ ನೋಂದಾಯಿಸಲು ಇಲ್ಲಿ ಕ್ಲಿಕ್ ಮಾಡಿ, ನೋಂದಾಯಿಸುವ ಪ್ರಕ್ರಿಯೆಯು ವಿವರಣೆಗಳಿಗಾಗಿ (flow chart) ಅನ್ನು ಓದಿಕೊಂಡು ಅದರಂತೆ ನೋಂದಾಯಿಸುವುದು.

6. 2024 ನೇ ಸಾಲಿಗಿಂತ ಹಿಂದಿನ ಪರೀಕ್ಷೆಗಳಲ್ಲಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಂದ ಮೂಲ ಅನುತ್ತೀರ್ಣ ಅಂಕಪಟ್ಟಿ/ಅರ್ಜಿ ಅಥವಾ ಹಿಂದಿನ ಎಂ.ಸಿ.ಎಗಳ ಆಧಾರದ ಮೇಲೆ ಪರೀಕ್ಷಾ ಶುಲ್ಕಗಳನ್ನು ಸ್ವೀಕರಿಸಿ ಪ್ರಾಂಶುಪಾಲರು ಮಂಡಲಿಯ PU EXAM ಲಾಗಿನ್‌ನಲ್ಲಿ ವಿದ್ಯಾರ್ಥಿಗಳ ಮಾಹಿತಿಯನ್ನು ಭರ್ತಿ ಮಾಡುವುದು.

7. 2006 ರಿಂದ ಹಿಂದಿನ ವರ್ಷಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಂದ ಮೂಲ ಅನುತ್ತೀರ್ಣ ಅಂಕಪಟ್ಟಿ/ಅರ್ಜಿ ಅಥವಾ ಹಿಂದಿನ ಎಂ.ಸಿ.ಎಗಳ ಆಧಾರದ ಮೇಲೆ ಪರೀಕ್ಷಾ ಶುಲ್ಕಗಳನ್ನು ಸ್ವೀಕರಿಸಿ ಸಂಬಂಧಿಸಿದ ದಾಖಲೆಗಳನ್ನು ಪ್ರಾಂಶುಪಾಲರು ದೃಢೀಕರಿಸಿ, ಮಂಡಲಿಗೆ ಸಲ್ಲಿಸುವುದು.

**2024ರ ದ್ವಿತೀಯ ಪಿಯುಸಿ ಪರೀಕ್ಷೆ–3ಕ್ಕೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಪಾವತಿಸಬೇಕಾದ ಶುಲ್ಕಗಳ ವಿವರ:–**

| ಪುನರಾವರ್ತಿತ ಅಭ್ಯರ್ಥಿಗಳು ಪಾವತಿಸಬೇಕಾದ ಪರೀಕ್ಷಾ ಶುಲ್ಕ (ಪರಿಶಿಷ್ಠ ಜಾತಿ, ಪರಿಶಿಷ್ಠ ವರ್ಗ ಹಾಗೂ ಪ್ರವರ್ಗ–1ರ ವಿದ್ಯಾರ್ಥಿಗಳನ್ನು ಹೊರತುಪಡಿಸಿ) | |
|---|---|
| ಒಂದು ವಿಷಯಕ್ಕೆ | ರೂ. 140/– |
| ಎರಡು ವಿಷಯಕ್ಕೆ | ರೂ. 270/– |
| ಮೂರು ಅಥವಾ ಹೆಚ್ಚಿನ ವಿಷಯಗಳು | ರೂ. 400/– |

| | |
|---|---|
| ➢ **2023-24 ನೇ ಸಾಲಿನ ಹೊಸಬರು ಮತ್ತು ಖಾಸಗಿಯಾಗಿ ನೋಂದಾವಣೆಯಾದ ಪರಿಶಿಷ್ಠ ಜಾತಿ, ಪರಿಶಿಷ್ಠ ವರ್ಗ ಹಾಗೂ ಪ್ರವರ್ಗ–1ರ ವಿದ್ಯಾರ್ಥಿಗಳು ONLINE ನಲ್ಲಿ ಸಂದಾಯಿಸಬೇಕಾದ PORTAL ಶುಲ್ಕ** | ರೂ. **01/–** |

| ಫಲಿತಾಂಶ ಉತ್ತಮಪಡಿಸಿಕೊಳ್ಳಲು (IMPROVEMENT) ಪಾವತಿಸಬೇಕಾದ ಶುಲ್ಕ | |
|---|---|
| ಪ್ರಥಮ ಬಾರಿಗೆ ಒಂದು ವಿಷಯಕ್ಕೆ | ರೂ. 175/– |

**2024 ರಲ್ಲಿ ನಡೆಸಲಾಗುವ ದ್ವಿತೀಯ ಪಿಯುಸಿ ಪರೀಕ್ಷೆ–3 ಕ್ಕೆ ಪುನರಾವರ್ತಿತ ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ನಿಗದಿಪಡಿಸಿರುವ ದಿನಾಂಕಗಳು**

| ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ಪಾವತಿಸಲು ಹಾಗೂ ಪುನರಾವರ್ತಿತ ಮತ್ತು ಫಲಿತಾಂಶ ಉತ್ತಮಪಡಿಸಿಕೊಳ್ಳುವ ವಿದ್ಯಾರ್ಥಿಗಳ ಮಾಹಿತಿಯನ್ನು ಪ್ರಾಂಶುಪಾಲರು ಮಂಡಲಿಯ PU EXAM ಲಾಗಿನ್‌ನಲ್ಲಿ ಇಂದೀಕರಿಸಲು ಕೊನೆಯ ದಿನಾಂಕ | | ಪ್ರಾಂಶುಪಾಲರು ಪರೀಕ್ಷಾ ಶುಲ್ಕವನ್ನು ಒಂದೇ ಕಂತಿನಲ್ಲಿ ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಪ್ರಾಂಶುಪಾಲರು ಪರೀಕ್ಷಾ ಅರ್ಜಿಗಳನ್ನು ಮೂಲ ಚಲನ್ ಸಹಿತ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಿನಾಂಕ |
|---|---|---|---|
| ದಂಡರಹಿತ | ದಿನಾಂಕ **23–05–2024** ರಿಂದ **28–05–2024** ರವರೆಗೆ | 29–05–2024 | 30–05–2024 |
| ದಂಡಸಹಿತ ದಿನಕ್ಕೆ ರೂ.50/– ರಂತೆ | **29–05–2024** ರಿಂದ **30–05–2024** ರವರೆಗೆ | 31–05–2024 | 01–06–2024 |

ಜಿಲ್ಲಾ ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, (ಪದವಿ ಪೂರ್ವ) ರವರು ಪ್ರಾಂಶುಪಾಲರಿಂದ ಸ್ವೀಕರಿಸಿದ ಪರೀಕ್ಷಾ ಅರ್ಜಿಗಳನ್ನು ಮಂಡಲಿಯ PU EXAM ಲಾಗಿನ್‌ನಲ್ಲಿ ಇಂಧೀಕರಿಸಿರುವುದನ್ನು ಕಡ್ಡಾಯವಾಗಿ ಖಾತ್ರಿಪಡಿಸಿಕೊಂಡು ಚೆಕ್‌ಲಿಸ್ಟನ್ನು ಪರಿಶೀಲಿಸಿ, ಪ್ರಾಂಶುಪಾಲರುಗಳಿಂದ ಅಪ್‌ಡೇಟ್ ಮಾಡಿರುವುದಕ್ಕೆ ಮುಚ್ಚಳಿಕೆ ಪತ್ರ ಪಡೆದ ನಂತರ ಕಾಲೇಜುವಾರು ಕ್ರೋಢೀಕೃತ ವಿದ್ಯಾರ್ಥಿಗಳ ಪಟ್ಟಿ, ಹಣ ಪಾವತಿಸಿರುವ ಮೂಲ ಚಲನ್ ಹಾಗೂ ಮುಚ್ಚಳಿಕೆ ಪತ್ರವನ್ನು **'ಖುದ್ದಾಗಿ'** ಕೆಳಗೆ ತಿಳಿಸಿದ ವೇಳಾಪಟ್ಟಿಯಂತೆ ಮಂಡಲಿಗೆ ಸಲ್ಲಿಸಬೇಕು. ಜಿಲ್ಲಾ ಉಪನಿರ್ದೇಶಕರುಗಳು, ಹಿಂದಿನ ವರ್ಷಗಳಲ್ಲಿ ಸದರಿ ದಾಖಲೆಗಳನ್ನು ಕೇಂದ್ರ ಕಛೇರಿಗೆ ವಿಳಂಬವಾಗಿ ನೀಡಿರುವ ಹಿನ್ನೆಲೆಯಲ್ಲಿ ಈ ವರ್ಷದಲ್ಲಿ **'ಮುದ್ದಾಂ'** ಆಗಿ ನಿಗದಿತ ದಿನಾಂಕದೊಳಗೆ ದಾಖಲೆಗಳನ್ನು ನೀಡದಿರುವ ಉಪನಿರ್ದೇಶಕರುಗಳು ಮತ್ತು ಪ್ರಾಂಶುಪಾಲರುಗಳನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು. ಆದ್ದರಿಂದ ಯಾವುದೇ ವಿಳಂಬಕ್ಕೆ ಆಸ್ಪದ ನೀಡದಿರಲು ಸೂಚಿಸಿದೆ.

| **ಅರ್ಜಿಗಳ ವಿವರ** | **ಮಂಡಲಿಗೆ ಸಲ್ಲಿಸಬೇಕಾದ ದಿನಾಂಕ** |
|---|---|
| ದಿನಾಂಕ:30–05–2024 ರಂದು ಸ್ವೀಕರಿಸಿದ ದಂಡರಹಿತ ಪುನರಾವರ್ತಿತ ಹಾಗೂ ಫಲಿತಾಂಶ ಉನ್ನತೀಕರಣಕ್ಕಾಗಿ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಅರ್ಜಿಗಳು | **31/05/2024** |
| ದಿನಾಂಕ:01-06–2024 ರಂದು ಸ್ವೀಕರಿಸಿದ ದಂಡಸಹಿತ ಪುನರಾವರ್ತಿತ ಹಾಗೂ ಫಲಿತಾಂಶ ಉನ್ನತೀಕರಣಕ್ಕಾಗಿ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಅರ್ಜಿಗಳು | **04/06/2024** |

Manjunath 21/5/24.

ಅಧ್ಯಕ್ಷರು
ಕರ್ನಾಟಕ ಶಾಲಾ ಪರೀಕ್ಷೆ ಮತ್ತು
ಮೌಲ್ಯ ನಿರ್ಣಯ ಮಂಡಲಿ
ಬೆಂಗಳೂರು.

**ಪ್ರತಿಗಳು:–**

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರುಗಳು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ರವರ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ ಒಂದು ಪ್ರತಿಯನ್ನು **ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.**
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ **(ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು)**
3. ಮಂಡಲಿಯ ಗಣಕ ಶಾಖೆಗೆ **(ಮಂಡಲಿ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು)**
4. ಹೆಚ್ಚುವರಿ/ಕಛೇರಿ ಪ್ರತಿ.